ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಕಳಪೆ ಗುಣಮಟ್ಟದ ಕಾಮಗಾರಿಯ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

356 (565) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ-ಹುಮನಾಬಾದ್ ರಾಷ್ಟ್ರೀಯ ಹೆದ್ದಾರಿ 150-ಎ ಸಂಪರ್ಕ ಕಲ್ಪಿಸುವ ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿ ತುಂಬಾ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗೆ ಸರ್ಕಾರದ ವತಿಯಿಂದ ಟೆಂಡರ್ ಅಧಿಸೂಚನೆ ಪ್ರಕಾರ ನಿಗದಿಯಾಗಿರುವ ಮೊತ್ತವೆಷ್ಟು ; ಇ-ಟೆಂಡರ್ನಲ್ಲಿ ಅಂತಿಮವಾಗಿ ಆಯ್ಕೆಯಾದ ಗುತ್ತಿಗೆದಾರರು ನಮೂದಿಸಿದ ಮೊತ್ತವೆಷ್ಟು ; (ವಿವರವಾದ ಅಧಿಸೂಚನೆ ಹಾಗೂ ಟೆಂಡರ್ದಾರರು ಸಲ್ಲಿಸಿದ ದಾಖಲೆಗಳ ವಿವರ ನೀಡುವುದು)

(ಇ) ಸರ್ಕಾರಿ ನಿಗದಿಪಡಿಸಿದ ಟೆಂಡರ್ ಮೊತ್ತಕ್ಕಿಂತ ಗುತ್ತಿಗೆದಾರರು ಕಡಿಮೆ ಮೊತ್ತವನ್ನು ಸದರಿ ಕಾಮಗಾರಿಗೆ ನಮೂದಿಸಿದ್ದಾರೆಯೇ; ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಸರ್ಕಾರ ನಿಗದಿ ಮಾಡಿದ ಮೊತ್ತಕ್ಕಿಂತ ಕಡಿಮೆ ದರದಲ್ಲಿ ಕಾಮಗಾರಿ ಪೂರೈಸುವಾಗ ಸರ್ಕಾರದ ಪರವಾಗಿ ಕರ್ತವ್ಯ ನಿರ್ವಹಿಸುವ ಇಂಜಿನಿಯರ್‌ಗಳು ಈ ಕಾಮಗಾರಿ ಮೊತ್ತವನ್ನು ಟೆಂಡರ್ ಅಧಿಸೂಚನೆ ಹೊರಡಿಸುವಾಗ ಸರ್ಕಾರದ ಪರವಾಗಿ ಕೆಲಸ ಮಾಡದೆ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಈ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ? (ವಿವರವಾದ ಮಾಹಿತಿ ನೀಡುವುದು)